ಪತ್ರಿಕಾ ತುಣುಕುಗಳು
PAPER CLIPPINGS
ದಿನಾಂಕ : DATE : 22/7/20
ಇಲಾಖೆ / ವಿಷಯ : DEPARTMENT / SUBJECT: ಮುಖ್ಯಮಂತ್ರಿ
ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ

# ರಾಜ್ಯದಲ್ಲಿ ಲಾಕ್‌ಡೌನ್‌ಗೆ ತೆರೆ

22/7/20

**ಸಂ.ಕ. ಸಮಾಚಾರ ಬೆಂಗಳೂರು**

ಬುಧವಾರದಿಂದ ಬೆಂಗಳೂರು ಸೇರಿದಂತೆ ಎಲ್ಲಿಯೂ ಇನ್ನು ಮುಂದೆ ಲಾಕ್‌ಡೌನ್ ಇರುವುದಿಲ್ಲ ಆದರೆ ಕಂಟೈನ್‌ಮೆಂಟ್ ಪ್ರದೇಶಗಳಲ್ಲಿ ಬಿಗಿಯಾದ ಕ್ರಮ ಅನುಸರಿಸಲಾಗುವುದು ಎಂದು ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಘೋಷಿಸಿದ್ದಾರೆ.

ಫೇಸ್ಬುಕ್ ಲೈವ್‌ನಲ್ಲಿ ರಾಜ್ಯದ ಜನತೆಯನ್ನುದ್ದೇಶಿಸಿ ಮಾತನಾಡಿದ ಅವರು, ಕೊರೊನಾ ನಿಯಂತ್ರಣಕ್ಕೆ ಲಾಕ್‌ಡೌನ್ ಒಂದೇ ಪರಿಹಾರವಲ್ಲ. ರಾಜ್ಯದಲ್ಲಿ ಆರ್ಥಿಕ ಸಂಪನ್ಮೂಲ ಕ್ರೋಢೀಕರಿಸುವ ಅನಿವಾರ್ಯತೆ ಇದೆ. ಕೊರೊನಾದಿಂದ ಕುಸಿದು ಹೋಗಿರುವ ಆರ್ಥಿಕ ವ್ಯವಸ್ಥೆಯನ್ನು ಸುಧಾರಣೆ ಮಾಡಿಕೊಳ್ಳಬೇಕಾಗಿದೆ. ಹೀಗಾಗಿ ಜನರೇ ಎಚ್ಚೆತ್ತು ಮುನ್ನೆಚ್ಚರಿಕೆ ಕ್ರಮಗಳನ್ನು ಅನುಸರಿಸಬೇಕು.

ಕೊರೊನಾ ನಿಯಂತ್ರಣದ ಸಂಬಂಧ ಸರ್ಕಾರ ಅನೇಕ ಕ್ರಮಗಳನ್ನು ಕೈಗೊಂಡಿದೆ. ವೈದ್ಯರು, ನರ್ಸ್‌ಗಳು, ಎಲ್ಲ ಕೊರೊನಾ ವಾರಿಯರ್ಸ್‌ಗಳು ತಮ್ಮ ಜೀವ ಪಣಕ್ಕಿಟ್ಟು ದುಡಿಯುತ್ತಿದ್ದಾರೆ. ಇಡೀ ಸರ್ಕಾರ ಇನ್ನಿಲ್ಲದ ಪ್ರಯತ್ನ ಮಾಡುತ್ತಿದೆ ಆದರೆ ವಿರೋಧ ಪಕ್ಷದವರು ಈಗಿನ ಸಂದರ್ಭದಲ್ಲಿ ಆರೋಪ, ಟೀಕೆಗಳನ್ನು ಮಾಡುವುದು ಸರಿಯಲ್ಲ. ಕೊರೊನಾ ಉಪಕರಣ ಖರೀದಿಯಲ್ಲಿ ಒಂದು ರೂ. ದುರುಪಯೋಗವೂ ನಡೆದಿಲ್ಲ. ಯಾವುದೇ ಮಾಹಿತಿಯನ್ನು ನಾವು ಕೊಡಲು ಸಿದ್ಧರಿದ್ದೇವೆ. ವಿಪಕ್ಷ ನಾಯಕರು ಬಂದು ಯಾವುದೇ ದಾಖಲೆಗಳನ್ನು ಕೇಳಿದರೂ ನೀಡಲು ನಾವು ಸಿದ್ಧರಿದ್ದೇವೆ. ಅದರಲ್ಲೂ ಪ್ರತಿಪಕ್ಷದ ನಾಯಕ ಸಿದ್ದರಾಮಯ್ಯ ಸರ್ಕಾರಕ್ಕೆ ಸಲಹೆ ಸೂಚನೆಗಳನ್ನು ನೀಡಲಿ ಅದು ಬಿಟ್ಟು ವೃಥಾ ಆರೋಪ ಮಾಡಬಾರದು. ಯಾರೇ ಆಗಲಿ ಇಂತಹ ಸಂದರ್ಭದಲ್ಲಿ ಹೇಳಿಕೆಗಳನ್ನು ನೀಡಿ ಗೊಂದಲ ಸೃಷ್ಟಿಸಬಾರದು ಎಂದು ಕಿವಿಮಾತು ಹೇಳಿದರು.

ಯಾವುದೇ ಪರಿಸ್ಥಿತಿಯಲ್ಲಿ ಎಲ್ಲರೂ ಸೇರಿ ಕೊರೊನಾ ಸೋಂಕನ್ನು ಹಿಮ್ಮೆಟ್ಟಿಸಬೇಕಾಗಿದೆ. ಎಲ್ಲರೂ ಕಡ್ಡಾಯವಾಗಿ ಮಾಸ್ಕ್ ಧರಿಸಬೇಕು. ಸಾಮಾಜಿಕ ಅಂತರವನ್ನು ಕಾಯ್ದುಕೊಳ್ಳಬೇಕು. ಎಷ್ಟು ಕಟ್ಟುನಿಟ್ಟಿನ ನಿಯಮಗಳನ್ನು ಅನುಸರಿಸುತ್ತೀರೋ ಅಷ್ಟು ಕೊರೊನಾ ಸೋಂಕನ್ನು ತಡೆಗಟ್ಟಬಹುದು. ಕೊರೊನಾ ನಿಯಂತ್ರಣಕ್ಕೆ ತಜ್ಞರು ನೀಡಿರುವ ಐದು ಟಿ ತಂತ್ರಗಳು ಪ್ರಮುಖವಾಗಿವೆ.

ಟ್ರೇಸ್(ಪತ್ತೆ) ಟ್ರ್ಯಾಕ್(ಹುಡುಕು) ಟೆಸ್ಟ್(ಪರೀಕ್ಷೆ) ಟ್ರೀಟ್(ಚಿಕಿತ್ಸೆ) ಹಾಗೂ ಟೆಕ್ನಾಲಜಿ(ತಂತ್ರಜ್ಞಾನ) ಇವುಗಳನ್ನು ಅಳವಡಿಸಿಕೊಳ್ಳುವಲ್ಲಿ ಸರ್ಕಾರ ಈಗಾಗಲೇ ಮುಂಚೂಣಿಯಲ್ಲಿದೆ.

ಇದರಿಂದ ಕೊರೊನಾ ತಡೆಯಬಹುದು ಎಂಬುದು ನನ್ನ ಬಲವಾದ ನಂಬಿಕೆಯಾಗಿದೆ. ರಾಜ್ಯದಲ್ಲಿ ಪತ್ತೆಯಾಗಿರುವ ಶೇ. 80ಕ್ಕೂ ಹೆಚ್ಚು ಸೋಂಕಿತರಲ್ಲಿ ಯಾವುದೇ ರೋಗ ಲಕ್ಷಣಗಳು ಇಲ್ಲ. ಇಂತಹ ಲಘುರೋಗ ಲಕ್ಷಣ ಇರುವವರಿಗೆ ಆಸ್ಪತ್ರೆಯ ಅವಶ್ಯಕತೆ ಇರುವುದಿಲ್ಲ ಎಂಬುದು ಜನರು ಮನವರಿಕೆ ಮಾಡಿಕೊಳ್ಳಬೇಕು. ಅಂಥವರನ್ನು ಕೊರೊನಾ ಕೇಂದ್ರಗಳಲ್ಲಿ ಅಥವಾ ಮನೆಯಲ್ಲಿ ಪ್ರತ್ಯೇಕವಾಗಿ ಇರಿಸಲಾಗುವುದು. ಸೋಂಕಿತರಲ್ಲಿ ಶೇ. 5 ರಷ್ಟು ಮಂದಿಗೆ ಮಾತ್ರ ಐಸಿಯು ಅಥವಾ ವೆಂಟಿಲೇಟರ್‌ನ ಅವಶ್ಯಕತೆ ಇದೆ ಎಂಬುದು ಈಗಾಗಲೇ ಅನುಭವಕ್ಕೆ ಬಂದಿದೆ. ಕೊರೊನಾ ಚಿಕಿತ್ಸೆಗೆ ಈಗಾಗಲೇ 11230 ಹಾಸಿಗೆಗಳನ್ನು ಮೀಸಲಾಗಿರಿಸಿದೆ. ಹಿಂದೆ ಪರೀಕ್ಷಾ ವರದಿ ಬರಲು ತಡವಾಗುತ್ತಿದ್ದು, ಇನ್ನು ಮುಂದೆ 24 ಗಂಟೆಯೊಳಗೆ ಪರೀಕ್ಷಾ ವರದಿ ಬರುವಂತೆ ನೋಡಿಕೊಳ್ಳಲಾಗುವುದು ಎಂದರು.




- ಲಾಕ್‌ಡೌನ್ ಒಂದೇ ಪರಿಹಾರವಲ್ಲ
- ಆರ್ಥಿಕ ಸಂಪನ್ಮೂಲ ಕ್ರೋಢೀಕರಣ ಅನಿವಾರ್ಯ
- ಜನರೇ ಮುನ್ನೆಚ್ಚರಿಕೆ ಕ್ರಮ ತೆಗೆದುಕೊಳ್ಳಿ
- ಮಾಸ್ಕ್, ಸಾಮಾಜಿಕ ಅಂತರ ಕಡ್ಡಾಯ
- ಪ್ರತಿಪಕ್ಷಗಳು ಸಲಹೆ ಕೊಡಲಿ-ಆರೋಪ ಬೇಡ
- ವೃಥಾ ಗೊಂದಲ ಸೃಷ್ಟಿ ಮಾಡಬೇಡಿ
- ತಜ್ಞರು ನೀಡಿರುವ 5ಟಿ ಪಾಲನೆ
- ಅಂಜಬೇಡಿ, ಅಳುಕಬೇಡಿ, ಸರ್ಕಾರ ನಿಮ್ಮ ಜತೆ ಇದೆ

## ಕೊರೊನಾ ಹೆಮ್ಮಾರಿ

### ದೇಶದಲ್ಲಿ ಸೋಂಕು

| | |
|---|---|
| ಸೋಂಕಿತರು | 11,55,191 |
| ಮೃತರು | 28,084 |
| ಗುಣಮುಖರು | 7,24,578 |

### ಕರ್ನಾಟಕ

| | |
|---|---|
| 24 ಗಂಟೆಗಳಲ್ಲಿ ಸೋಂಕಿತರು | 3,649 |
| ಬೆಂಗಳೂರು: ಒಂದೇ ದಿನ ಸೋಂಕು | 1,714 |
| ಈವರೆಗಿನ ಸೋಂಕಿತರು | 71,069 |
| ಒಟ್ಟು ಮೃತಪಟ್ಟವರು | 1,464 |
| ಬೆಂಗಳೂರಿನಲ್ಲಿ ಒಂದೇ ದಿನ ಸಾವು | 22 |
| ರಾಜ್ಯದಲ್ಲಿ ಒಂದೇ ದಿನ ಸಾವು | 61 |